# ಅಭಿಮಾನಿಗಳಿಂದ ದೇಶಪಾಂಡೆ ಜನ್ಮದಿನಾಚರಣೆ

**ಹಳಿಯಾಳ:** ರಾಜ್ಯ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಹಾಗೂ ಹಿರಿಯ ಶಾಸಕ ಆರ್.ವಿ. ದೇಶಪಾಂಡೆಯವರ ಹುಟ್ಟುಹಬ್ಬವನ್ನು ಹಳಿಯಾಳ ತಾಲೂಕಿನೆಲ್ಲೆಡೆ ಭಾರೀ ಸಂಭ್ರಮದಿಂದ ಆಚರಿಸಲಾಯಿತು.



**ಶಾಸಕ ಆರ್.ವಿ. ದೇಶಪಾಂಡೆಯವರ ಜನ್ಮದಿನಾಚರಣೆಯ ನಿಮಿತ್ಯ ಸೋಮವಾರ ಪಟ್ಟಣದಲ್ಲಿ ರಕ್ತದಾನ ಶಿಬಿರ, ಆಸ್ಪತ್ರೆಯಲ್ಲಿನ ರೋಗಿಗಳಿಗೆ ಹಣ್ಣು ಹಂಪಲ ವಿತರಿಸಲಾಯಿತು.**

ಜನ್ಮದಿನಾಚರಣೆಯ ನಿಮಿತ್ಯ ವಿವಿಧೆಡೆ ರಕ್ತದಾನ ಶಿಬಿರವು ನಡೆಯಿತು, ದೇಶಪಾಂಡೆ ಅಭಿಮಾನಿಗಳು ಹಾಗೂ ಕಾರ್ಯಕರ್ತರು ಪಟ್ಟಣ ಸೇರಿದಂತೆ ಗ್ರಾಮೀಣ ಭಾಗದಲ್ಲಿ ಸರ್ಕಾರಿ ಆಸ್ಪತ್ರೆಗೆ ತೆರಳಿ ದಾಖಲಾಗಿರುವ ರೋಗಿಗಳಿಗೆ ಹಣ್ಣು ಹಂಪಲು, ಬಿಸ್ಕತ್ ವಿತರಿಸಿದರು. ಕೆಲವೆಡೆ ಶಾಲಾ ಮಕ್ಕಳಿಗೆ ಮಿಠಾಯಿ ವಿತರಿಸಿ ಸಂಭ್ರಮಿಸಿದರು. ಪಟ್ಟಣದ ಸೇರಿದಂತೆ ಗ್ರಾಮೀಣ ಭಾಗದಲ್ಲಿ ವಿವಿಧ ದೇವಸ್ಥಾನಗಳಲ್ಲಿ ಪೂಜೆ, ಹೋಮ-ಹವನಗಳು ನಡೆಸಿ ದೇಶಪಾಂಡೆಯವರಿಗೆ ಶುಭವಾಗಲೆಂದು ಪ್ರಾರ್ಥಿಸಲಾಯಿತು.

ಪಟ್ಟಣದ ಶಾಸಕರ ಕಾರ್ಯಾಲಯದಲ್ಲಿ ಕೇಕ್ ಕತ್ತರಿಸಿ ಸಂಭ್ರಮಾಚರಣೆ ನಡೆಸಿ, ಮೆರವಣಿಗೆ ನಡೆಸಿ ಜೈಕಾರ ಹಾಕಿದರು. ಕೆನರಾಬ್ಯಾಂಕ್ ದೇಶಪಾಂಡೆ ಆರ್‌ಸೆಟಿ ಹಾಗೂ ಧಾರವಾಡ ಬ್ಲಡ್ ಬ್ಯಾಂಕ್ ಸಹಯೋಗದಲ್ಲಿ ಇಲ್ಲಿನ ದೇಶಪಾಂಡೆ ಖಾಸಗಿ ಕೈಗಾರಿಕಾ ತರಬೇತಿ ಕೇಂದ್ರದಲ್ಲಿ ರಕ್ತದಾನ ಶಿಬಿರವು ನಡೆಯಿತು. ಧಾರವಾಡ ಬ್ಲಡ್ ಬ್ಯಾಂಕ್ ಹಿರಿಯ ವೈದ್ಯ ಡಾ. ಎಂ.ಎಂ. ಹಿರೇಮಠ ವಿದ್ಯಾರ್ಥಿಗಳಿಗೆ ರಕ್ತದಾನದ ಮಹತ್ವ ತಿಳಿಸಿದರು.

ವಿಆರ್‌ಡಿಎಮ್ ಟ್ರಸ್ಟ್ ಆಡಳಿತಾಧಿಕಾರಿ ಪ್ರಕಾಶ ಪ್ರಭು, ಆರ್‌ಸೆಟಿಯ ನಿರ್ದೇಶಕ ಪ್ರಶಾಂತ ಬಡ್ಡಿ, ಸಂಯೋಜಕ ವಿನಾಯಕ್ ಚವ್ಹಾಣ, ಕೈಗಾರಿಕಾ ತರಬೇತಿ ಕೇಂದ್ರದ ಪ್ರಾಚಾರ್ಯ ಡಿ.ಆರ್. ನಾಯ್ಕ ಹಾಗೂ ಇತರರು ಇದ್ದರು.

ಪಟ್ಟಣದ ಕೆ.ಎಲ್.ಎಸ್ ಸಂಸ್ಥೆಯ ಇಂಜಿನಿಯರಿಂಗ್ ಕಾಲೇಜಿನಲ್ಲೂ ರಕ್ತದಾನ ಶಿಬಿರವು ನಡೆಯಿತು. ನವನಗರದ ಪದ್ಮಶ್ರೀ ಆರ್.ಬಿ.ಪಾಟೀಲ ಆಸ್ಪತ್ರೆಯ ವೈದ್ಯ ಡಾ.ಉಮೇಶ ಹಳ್ಳಿಕೇರಿ ರಕ್ತದಾನದ ಮಹತ್ವ ವಿವರಿಸಿದರು. 75ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸಿಬ್ಬಂದಿ ರಕ್ತದಾನ ಮಾಡಿದರು. ಪ್ರಾಚಾರ್ಯ ಡಾ.ವಿ.ಎ. ಕುಲಕರ್ಣಿ,ಉಪನ್ಯಾಸಕರು ಉಪಸ್ಥಿತರಿದ್ದರು.

c

# ಹಳಿಯಾಳ ತಾಲೂಕಿನೆಲ್ಲೆಡೆ ಸಂಭ್ರಮದಿಂದ ಆರ್‌ವಿಡಿ ಜನ್ಮದಿನಾಚರಣೆ

• **ಕನ್ನಡಪ್ರಭ ವಾರ್ತೆ** ಹಳಿಯಾಳ

ಶಾಸಕ ಆರ್.ವಿ. ದೇಶಪಾಂಡೆಯವರ ಹುಟ್ಟುಹಬ್ಬವನ್ನ ತಾಲೂಕಿನೆಲ್ಲೆಡೆ ಸಂಭ್ರಮದಿಂದ ಆಚರಿಸಲಾಯಿತು.

ಜನ್ಮದಿನಾಚರಣೆಯ ನಿಮಿತ್ತ ವಿವಿಧೆಡೆ ರಕ್ತದಾನ ಶಿಬಿರವು ನಡೆಯಿತು. ದೇಶಪಾಂಡೆ ಅಭಿಮಾನಿಗಳು ಹಾಗೂ ಕಾರ್ಯಕರ್ತರು ಪಟ್ಟಣ ಸೇರಿದಂತೆ ಗ್ರಾಮೀಣ ಭಾಗದಲ್ಲಿ ಸರ್ಕಾರಿ ಆಸ್ಪತ್ರೆಗೆ ತೆರಳಿ ರೋಗಿಗಳಿಗೆ ಹಣ್ಣು ಹಂಪಲು ಬಿಸ್ಕಿಟ್ ವಿತರಿಸಿದರೇ, ಇನ್ನೂ ಕೆಲವೆಡೆ ಶಾಲಾ ಮಕ್ಕಳಿಗೆ ಸಿಹಿಮಿಠಾಯಿ ವಿತರಿಸಿ ಸಂಭ್ರಮಿಸಿದರು. ಪಟ್ಟಣದ ಸೇರಿದಂತೆ ಗ್ರಾಮೀಣ ಭಾಗದಲ್ಲಿ ವಿವಿಧ ದೇವಸ್ಥಾನಗಳಲ್ಲಿ ಪೂಜೆ, ಹೋಮ ಹವನಗಳು ನಡೆಸಿ ದೇಶಪಾಂಡೆಯವರಿಗೆ ಶುಭವಾಗಲೆಂದು ಪ್ರಾರ್ಥಿಸಲಾಯಿತು. ಪಟ್ಟಣದ ಶಾಸಕರ ಕಾರ್ಯಾಲಯದಲ್ಲಿ ಕೇಕ್ ಕತ್ತರಿಸಿ ಸಂಭ್ರಮಾಚರಣೆ ನಡೆಸಲಾಯಿತು. ಇನ್ನು ಕೆಲ ಕಾರ್ಯಕರ್ತರು, ಪಕ್ಷದ ಪ್ರಮುಖರು ಸೇರಿ ದೇಶಪಾಂಡೆಯವರ ಭಾವಚಿತ್ರ ಹಿಡಿದು ಮೆರವಣಿಗೆ ನಡೆಸಿ ಜೈಕಾರ ಹಾಕಿದರು.

ರಕ್ತದಾನ ಶಿಬಿರ:

ಕೆನರಾಬ್ಯಾಂಕ್ ದೇಶಪಾಂಡೆ ಆರ್‌ಸೆಟಿ ಹಾಗೂ ಧಾರವಾಡ ಬ್ಲಡ್ ಬ್ಯಾಂಕ್ ಸಹಯೋಗದಲ್ಲಿ ಇಲ್ಲಿನ ದೇಶಪಾಂಡೆ ಖಾಸಗಿ ಕೈಗಾರಿಕಾ ತರಬೇತಿ ಕೇಂದ್ರದಲ್ಲಿ ರಕ್ತದಾನ ಶಿಬಿರವು ನಡೆಯಿತು. ಧಾರವಾಡ ಬ್ಲಡ್ ಬ್ಯಾಂಕ್ ಹಿರಿಯ ವೈದ್ಯ ಡಾ. ಎಂ.ಎಂ. ಹಿರೇಮಠ ರಕ್ತದಾನದ ಮಹತ್ವ ತಿಳಿಸಿದರು. ತರಬೇತಿ ಕೇಂದ್ರದ ವಿದ್ಯಾರ್ಥಿಗಳು, ಸಿಬ್ಬಂದಿ ಸೇರಿದಂತೆ ಸೇರಿ 40 ಯೂನಿಟ್‌ರಕ್ತದಾನಮಾಡಿದರು.ವಿ.ಆರ್.ಡಿ.ಎಮ್. ಟ್ರಸ್ಟ್ ಆಡಳಿತಾಧಿಕಾರಿ ಪ್ರಕಾಶ ಪ್ರಭು, ಆರ್‌ಸೆಟಿಯ ನಿರ್ದೇಶಕ ಪ್ರಶಾಂತ ಬಡ್ಡಿ, ಸಂಯೋಜಕ ವಿನಾಯಕ್ ಚವ್ಹಾಣ, ಕೈಗಾರಿಕಾ ತರಬೇತಿ ಕೇಂದ್ರದ ಪ್ರಾಚಾರ್ಯ ಡಿ.ಆರ್. ನಾಯ್ಕ ಹಾಗೂ ಇತರರು ಇದ್ದರು.

ಪಟ್ಟಣದಕೆ.ಎಲ್.ಎಸ್‌ಸಂಸ್ಥೆಯಎಂಜಿನಿಯರಿಂಗ್



ಕಾಲೇಜಿನಲ್ಲೂ ರಕ್ತದಾನ ಶಿಬಿರವು ನಡೆಯಿತು. ನವನಗರದ ಪದ್ಮಶ್ರೀ ಆರ್.ಬಿ. ಪಾಟೀಲ ಆಸ್ಪತ್ರೆಯ ವೈದ್ಯ ಡಾ. ಉಮೇಶ ಹಳ್ಳಿಕೇರಿ ರಕ್ತದಾನಧದ ಮಹತ್ವ ವಿವರಿಸಿದರು.ಕಾಲೇಜಿನ75ಕ್ಕೂಹೆಚ್ಚುವಿದ್ಯಾರ್ಥಿಗಳು ಸಿಬ್ಬಂದಿ ರಕ್ತದಾನ ಮಾಡಿದರು. ಕಾಲೇಜಿನ ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ ಹಾಗೂ ಕಾಲೇಜಿನ ವಿವಿಧ ವಿಭಾಗದ ಪ್ರಮುಖರು, ಉಪನ್ಯಾಸಕರು ಉಪಸ್ಥಿತರಿದ್ದರು.

# ದೇಶಪಾಂಡೆ ಜನ್ಮದಿನ: ರಕ್ತದಾನ ಶಿಬಿರ ಯಶಸ್ವಿ

• **ಹಳಿಯಾಳ:** ದಾಂಡೇಲಿ, ಜೋಯಿಡಾ ವಿಧಾನಸಭಾ ಶಾಸಕರು ಹಾಗೂ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷರಾದ ಆರ್.ವಿ.ದೇಶಪಾಂಡೆಯವರ ಜನ್ಮದಿನದ ಪ್ರಯುಕ್ತ ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಮಹಾವಿದ್ಯಾಲಯದಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಸೋಮವಾರ ಆಯೋಜಿಸಲಾಗಿತ್ತು.

ಪದ್ಮಶ್ರೀ ಆರ್.ಬಿ.ಪಾಟೀಲ್ ಕ್ಯಾನ್ಸರ್ ಹಾಸ್ಪಿಟಲ್ ನವ ನಗರದ ಡಾ. ಉಮೇಶ್ ಹಳ್ಳಿ ಕೇರಿಯವರು ಅತಿಥಿಗಳಾಗಿ ಮಾತನಾಡಿ, ರಕ್ತದಾನ ಮಹಾದಾನವಾಗಿದ್ದು, ರಕ್ತದಾನದಿಂದ ಜೀವವನ್ನು ಉಳಿಸಬಹುದಾಗಿದೆ ಎಂದು ಹೇಳಿದರು. ಉತ್ತಮ ರಕ್ತವನ್ನು ಹೊಂದಲು ವಿದ್ಯಾರ್ಥಿಗಳು ಮಾದಕ ವಸ್ತು ಸೇವಿಸದಂತೆ ಕಿವಿಮಾತು ಹೇಳಿದರು.

ಅಧ್ಯಕ್ಷತೆ ವಹಿಸಿದ ಶೈಕ್ಷಣಿಕ ವಿಭಾಗದ ಡೀನ್ ಡಾ.ಗುರುರಾಜ ಹಟ್ಟಿ ಉತ್ತಮ ಆರೋಗ್ಯ ಹೊಂದಲು ಪ್ರತಿ ದಿನ ದೈಹಿಕ ಪರಿಶ್ರಮ ಪಡುವಂತೆ ಹೇಳಿದರು. ವಿದ್ಯಾರ್ಥಿಗಳ ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿ ಸಮಾಜಕ್ಕೆ ಕೊಡುಗೆ ನೀಡಬೇಕೆಂದು ಹೇಳಿದರು.

75ಕ್ಕೂ ಅಧಿಕ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿ ಸಮಾಜಕ್ಕೆ ಕೊಡುಗೆ ನೀಡಿದರು. ವಿಆರ್‌ಡಿಎಂ ಟ್ರಸ್ಟ್ ನ ಆಡಳಿತಾಧಿಕಾರಿ ಪ್ರಕಾಶ್ ಪ್ರಭು, ಡೀನ್ ಪ್ರೊ ಮಂಜುನಾಥ್, ಎನ್‌ಎಸ್‌ಎಸ್ ಘಟಕದ ಸಂಚಾಲಕ ಪ್ರೊ. ಸಂತೋಷ ಸವಣೂರ್ ಮತ್ತು ರೆಡ್ ರಿಬ್ಬನ್ ಕ್ಲಬ್ ಸಂಚಾಲಕಿ ಪ್ರೊ. ಜ್ಯೋತಿ ಕಮ್ಮಾರ್ ಕಾರ್ಯಕ್ರಮವನ್ನು ಆಯೋಜಿಸಿದ್ದರು. ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕ, ರೆಡ್ ರಿಬ್ಬನ್ ಕ್ಲಬ್ ಮತ್ತು ವಿ ಆರ್ ಡಿಎಂ ಟ್ರಸ್ಟ್ ನ ಜಂಟಿ ಸಯೋಗದಲ್ಲಿ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು. ರಕ್ತದಾನ ಮೂಲಕ ವಿದ್ಯಾರ್ಥಿಗಳು ಸಮಾಜ ಸೇವೆ ಸಲ್ಲಿಸುತ್ತಿರುವುದು ಸಂತಸದ ವಿಷಯವಾಗಿದೆ ಎಂದು ಪ್ರಾಚಾರ್ಯ ಡಾ.ವಿ.ಎ ಕುಲಕರ್ಣಿ ತಿಳಿಸಿದ್ದಾರೆ.



# ವಿಡಿಐಟಿಯಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಯಶಸ್ವಿ





● **ತತ್ವನಿಷ್ಠ, ಹಳಿಯಾಳ:** ಹಳಿಯಾಳ, ದಾಂಡೇಲಿ, ಜೋಯಿಡಾ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷರಾದ ಶ್ರೀ ಆರ್.ವಿ. ದೇಶಪಾಂಡೆ ಅವರ ಜನ್ಮದಿನದ ಪ್ರಯುಕ್ತ ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಮಹಾವಿದ್ಯಾಲಯದಲ್ಲಿ ಮಾರ್ಚ್ 16ರಂದು ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು.

ಪದ್ಮಶ್ರೀ ಆರ್.ಬಿ. ಪಾಟೀಲ್ ಕ್ಯಾನ್ಸರ್ ಆಸ್ಪತ್ರೆ, ನವನಗರದ ಡಾ. ಉಮೇಶ್ ಹಳ್ಳಿಕೇರಿ ಶಿಬಿರದಲ್ಲಿ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ, ರಕ್ತದಾನ ಮಹಾದಾನವಾಗಿದ್ದು, ರಕ್ತದಾನದಿಂದ ಅನೇಕ ಜೀವಗಳನ್ನು ಉಳಿಸಬಹುದಾಗಿದೆ ಎಂದು ಹೇಳಿದರು. ಉತ್ತಮ ಆರೋಗ್ಯ ಹಾಗೂ ಶುದ್ಧ ರಕ್ತವನ್ನು ಹೊಂದಲು ವಿದ್ಯಾರ್ಥಿಗಳು ಮಾದಕ ವಸ್ತುಗಳಿಂದ ದೂರವಿರಬೇಕು ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶೈಕ್ಷಣಿಕ ವಿಭಾಗದ ಡೀನ್ ಡಾ. ಗುರುರಾಜ ಹಟ್ಟಿ ಮಾತನಾಡಿ, ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಪ್ರತಿದಿನ ದೈಹಿಕ ಪರಿಶ್ರಮ ಅಗತ್ಯವಾಗಿದೆ ಎಂದು ತಿಳಿಸಿದರು. ವಿದ್ಯಾರ್ಥಿಗಳು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡುವ ಮೂಲಕ ಸಮಾಜಕ್ಕೆ ಮಹತ್ವದ ಕೊಡುಗೆ ನೀಡಬೇಕೆಂದು ಕರೆ ನೀಡಿದರು.

ಈ ಶಿಬಿರದಲ್ಲಿ 75ಕ್ಕೂ ಅಧಿಕ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿ ಮಾನವೀಯ ಸೇವೆ ಸಲ್ಲಿಸಿದರು.

ವಿ.ಆರ್.ಡಿ.ಎಂ ಟ್ರಸ್ಟ್‌ನ ಶ್ರೀ ಪ್ರಕಾಶ್ ಪ್ರಭು, ಡೀನ್ ಪ್ರೊ. ಮಂಜುನಾಥ್, ಎನ್‌ಎಸ್‌ಎಸ್ ಘಟಕದ ಸಂಚಾಲಕ ಪ್ರೊ. ಸಂತೋಷ ಸವಣೂರ ಹಾಗೂ ರೆಡ್ ರಿಬ್ಬನ್ ಕ್ಲಬ್ ಸಂಚಾಲಕಿ ಪ್ರೊ. ಜ್ಯೋತಿ ಕಮ್ಮಾರ್ ಅವರ ಸಹಯೋಗದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕ, ರೆಡ್ ರಿಬ್ಬನ್ ಕ್ಲಬ್ ಹಾಗೂ ವಿ.ಆರ್.ಡಿ.ಎಂ ಟ್ರಸ್ಟ್‌ನ ಜಂಟಿ ಸಹಯೋಗದಲ್ಲಿ ಶಿಬಿರ ನಡೆಯಿತು. ರಕ್ತದಾನ ಮಾಡುವ ಮೂಲಕ ವಿದ್ಯಾರ್ಥಿಗಳು ಸಮಾಜ ಸೇವೆಗೆ ಮುಂದಾಗಿರುವುದು ಸಂತಸದ ಸಂಗತಿಯಾಗಿದೆ ಎಂದು ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.